ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001

E-Mail: prydirector.edu.sgkar@nic.in

ಸಂಖ್ಯೆ : ಸಿ7(8)ಪ್ರಾಶಿಅ/ಆರ್.ಟಿ.ಇ/ದಾಖಲಾತಿ/2017-18 ದಿನಾಂಕ: 25-05-2017

## : : ಸುತ್ತೋಲೆ : :

ವಿಷಯ: 2017-18ನೇ ಸಾಲಿನಿಂದ ಆರ್.ಟಿ.ಇ ಅಡಿ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಪಠ್ಯ ಪುಸ್ತಕಗಳನ್ನು ಒದಗಿಸುವ ಬಗ್ಗೆ.

ಉಲ್ಲೇಖ: 1 ಸರ್ಕಾರದ ಆದೇಶ ಸಂಖ್ಯೆ ಇಡಿ 04 ಪಾಪಿತಿ 2017, ದಿನಾಂಕ:03-03-2017.

2.ಈ ಕಛೇರಿ ಸುತ್ತೋಲೆ ಸಂಖ್ಯೆ: ಸಿ7(8)ಆರ್.ಟಿ.ಇ/ಪ್ರಪು/2017-18. ದಿನಾಂಕ:02-05-2017.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(1) ರಲ್ಲಿನ ಸರ್ಕಾರದ ಆದೇಶದಂತೆ ಶಿಕ್ಷಣ ಹಕ್ಕು ಕಾಯ್ದೆಯಡಿ ದಾಖಲಾದ ವಿದ್ಯಾರ್ಥಿಗಳಿಗೆ ಉಚಿತವಾಗಿ ಕರ್ನಾಟಕ ಪಠ್ಯಪುಸ್ತಕ ಸಂಘದಿಂದ 2017-18ರಿಂದ ಉಚಿತವಾಗಿ ಪಠ್ಯ ಪುಸ್ತಕಗಳನ್ನು ಸರಬರಾಜು ಮಾಡುವುದಾಗಿ ಆದೇಶಿಸಿರುತ್ತದೆ.

ಕರ್ನಾಟಕ ರಾಜ್ಯದಲ್ಲಿ 2012-13ನೇ ಸಾಲಿನಿಂದ ಶಿಕ್ಷಣ ಹಕ್ಕು ಕಾಯ್ದೆಯಡಿ ಸೆಕ್ಷನ್ 12(1)(ಸಿ) ಅಡಿ ದಾಖಲಾತಿ ಮಾಡಲಾಗುತ್ತಿದೆ. 2017-18ನೇ ಸಾಲಿನಲ್ಲಿ ಪ್ರಾಥಮಿಕ 1ನೇ ತರಗತಿಯಿಂದ 6ನೇ ತರಗತಿವರೆಗೆ ಮುಂದುವರೆದ ತರಗತಿಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುತ್ತಾರೆ.

2017-18ನೇ ಸಾಲಿನ ಪಠ್ಯಪುಸ್ತಕಗಳ ಬೇಡಿಕೆಯನ್ನು ಈಗಾಗಲೇ ಶಾಲೆಗಳಿಂದ ಮಾಹಿತಿ ಪಡೆದು ತಾಲ್ಲೂಕುವಾರು ಬೇಡಿಕೆಯನ್ನು ಸಲ್ಲಿಸಲಾಗಿರುತ್ತದೆ ಮತ್ತು ತಾಲ್ಲೂಕುಗಳಿಗೆ ಸರಬರಾಜು ಆಗಿರುತ್ತದೆ. ಖಾಸಗಿ ಅನುದಾನರಹಿತ ಶಾಲೆಗಳಲ್ಲಿ ಆರ್.ಟಿ.ಇ ಅಡಿ ದಾಖಲಾತಿಯಾಗಿರುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಶೀರ್ಷಿಕೆವಾರು ಪಠ್ಯಪುಸ್ತಕಗಳ ಮೇಲೆ ನಮೂದಿಸಿರುವ ಮೊತ್ತವನ್ನು ತಿಳಿಸಿ **" ಆರ್.ಟಿ.ಇ ಮಕ್ಕಳಿಗೆ ಉಚಿತ ಸರಬರಾಜು "** ಎಂದು ಮುದ್ರೆಯನ್ನು ಹಾಕಿ ಶಾಲೆಗಳಿಗೆ ಸರಬರಾಜು ಮಾಡುವುದು. ಈ ರೀತಿ ಸರಬರಾಜು ಮಾಡಿರುವ ಒಟ್ಟು ಪಠ್ಯಪುಸ್ತಕಗಳ ವಿವರವನ್ನು ಶಾಲಾವಾರು ನಮೂದಿಸಿ ಉಪನಿರ್ದೇಶಕರು(ಆಡಳಿತ) ಇವರಿಗೆ ಸಲ್ಲಿಸುವುದು. ಉಪನಿರ್ದೇಶಕರು(ಆಡಳಿತ) ಇವರು ಜಿಲ್ಲೆಯ ಒಟ್ಟು ಪಠ್ಯ ಪುಸ್ತಕಗಳ ಮೊತ್ತದ ವಿವರವನ್ನು ಕರ್ನಾಟಕ ಪಠ್ಯ ಪುಸ್ತಕ ಸಂಘಕ್ಕೆ ಸಲ್ಲಿಸಿ, ಆರ್.ಟಿ.ಇ ಅಡಿ ಸರಬರಾಜು ಆಗಿರುವ ಒಟ್ಟು ಪಠ್ಯ ಪುಸ್ತಕಗಳು ಮತ್ತು ಒಟ್ಟು ಮೊತ್ತದ ಲೆಕ್ಕ ಹೊಂದಾಣಿಕೆ ಮಾಡಿಕೊಳ್ಳುವುದು. ಮಾಹಿತಿಯನ್ನು ಆಯುಕ್ತಾಲಯಕ್ಕೆ ಒದಗಿಸುವುದು.

ವಿದ್ಯಾರ್ಥಿಗಳ ಸಂಖ್ಯೆ ಮಾಹಿತಿ ತಂತ್ರಾಂಶದಲ್ಲಿ ಆನ್‌ಲೈನ್ ಮುಖಾಂತರ ನಮೂದಿಸಲಾಗಿರುವ ಮತ್ತು 2017-18ನೇ ಸಾಲಿನ ದಾಖಲಾತಿಗೆ ತಾಳೆ ಹೊಂದಬೇಕು. ವಿದ್ಯಾರ್ಥಿಗಳ ಸಂಖ್ಯೆಗೆ ಮತ್ತು ಪಠ್ಯಪುಸ್ತಕ ಸರಬರಾಜು ಮಾಡುವ ಬಗ್ಗೆ ಯಾವುದೇ ದೂರುಗಳು ಬಂದಲ್ಲಿ ಆಯಾ ವ್ಯಾಪ್ತಿಯ ಉಪನಿರ್ದೇಶಕರು (ಆಡಳಿತ) ಹಾಗೂ ಆಯಾ ವ್ಯಾಪ್ತಿಯ ಕ್ಷೇತ್ರಶಿಕ್ಷಣಾಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿಸಲಾಗುವುದು.

ಶಿಕ್ಷಣ ಹಕ್ಕು ಕಾಯ್ದೆಯಡಿ ದಾಖಲಾದ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಉಲ್ಲೇಖ(1) ಸರ್ಕಾರದ ಆದೇಶದಂತೆ ಉಚಿತವಾಗಿ ಪಠ್ಯ ಪುಸ್ತಕಗಳನ್ನು ನೀಡಬೇಕಾಗಿರುವುದರಿಂದ ಜಿಲ್ಲೆಗಳಿಂದ ಉಚಿತವಾಗಿ ಆರ್.ಟಿ.ಇ ಅಡಿ ನೀಡಲಾಗಿರುವ ಪಠ್ಯಪುಸ್ತಕಗಳ ಮೊತ್ತವನ್ನು ಕಡಿತಗೊಳಿಸಿ ಉಳಿದಿರುವ ಮೊತ್ತವನ್ನು ಆ ಶಾಲೆಗಳಿಂದ ಪಡೆಯುವ ಬಗ್ಗೆ ಕರ್ನಾಟಕ ಪಠ್ಯಪುಸ್ತಕ ಸಂಘವು ಅಗತ್ಯ ಕ್ರಮವಹಿಸಲು ಸೂಚಿಸಲಾಗಿದೆ.

([illegible])
ಆಯುಕ್ತರು.
ಸಾರ್ವಜನಿಕ ಶಿಕ್ಷಣ ಇಲಾಖೆ.

ರವರಿಗೆ,

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ). ಇವರಿಗೆ ಸೂಕ್ತ ಕ್ರಮಕ್ಕಾಗಿ.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರು. ಇವರಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ತಾಲ್ಲೂಕು / ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:

1) ಮಾನ್ಯ ಶಿಕ್ಷಣ ಸಚಿವರು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ. ಕರ್ನಾಟಕ ಸರ್ಕಾರ ಇವರಿಗೆ ಮಾಹಿತಿಗಾಗಿ ಅಪರ ಮುಖ್ಯ ಕಾರ್ಯದರ್ಶಿಗಳು. ಶಿಕ್ಷಣ ಇಲಾಖೆ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕರ್ನಾಟಕ ಸರ್ಕಾರ ಇವರ ಮುಖಾಂತರ.
2) ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕರ್ನಾಟಕ ಸರ್ಕಾರ ಬಹುಮಹಡಿಗಳ ಕಟ್ಟಡ, ಬೆಂಗಳೂರು-560001 ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
3) ಅಪರ ಆಯುಕ್ತರು, ಧಾರವಾಡ ವಿಭಾಗ, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಇವರಿಗೆ ಮಾಹಿತಿಗಾಗಿ.
4) ಅಪರ ಆಯುಕ್ತರು, ಕಲಬುರಗಿ ವಿಭಾಗ, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ಇವರಿಗೆ ಮಾಹಿತಿಗಾಗಿ.
5) ಕಛೇರಿ ಪ್ರತಿ.